# ಕರ್ನಾಟಕ ವಿಧಾನಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 1090 (1032) |
| ಸದಸ್ಯರ ಹೆಸರು | : | ಶ್ರೀ ಎ ವಸಂತ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 17.03.2025. |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆಯಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು; ಈ ಶಾಲಾ ಮಕ್ಕಳ ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ರಾಯಚೂರು ಜಿಲ್ಲೆಯಲ್ಲಿರುವ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳ ಸಂಖ್ಯೆ: 653<br>ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳ ಸಂಖ್ಯೆ: 719<br>ಸರ್ಕಾರಿ ಪ್ರೌಢ ಶಾಲೆಗಳ ಸಂಖ್ಯೆ: 230<br>ಈ ಶಾಲಾ ಮಕ್ಕಳ ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು:<br>• ರಾಜ್ಯದ ಎಲ್ಲಾ ಜಿಲ್ಲೆಗಳ ಶಿಕ್ಷಕರಿಗೆ ನೀಡುವಂತೆ ರಾಯಚೂರು ಜಿಲ್ಲೆಯ ಶಿಕ್ಷಕರಿಗೂ ಸಹ ಈ ಕೆಳಕಂಡ ತರಬೇತಿಗಳನ್ನು ನೀಡುವ ಮೂಲಕ ಶಿಕ್ಷಕರ ಬೋಧನಾ ಮತ್ತು ಮಕ್ಕಳ ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸಲಾಗುತ್ತಿದೆ.<br>➢ 2024 25ನೇ ಸಾಲಿನಲ್ಲಿ ಮರುಸಿಂಚನ (6 ರಿಂದ 10ನೇ ತರಗತಿ) ತರಬೇತಿ, ಗಣಿತ ಗಣಕ ತರಬೇತಿ, ನಲಿಕಲಿ ತರಬೇತಿ, ವಿಷಯವಾರು ತರಬೇತಿ ಹಾಗೂ ಐಐಎಸ್‌ಸಿ ತರಬೇತಿ, ಸೇವಾ ನಿರತ ಶಿಕ್ಷಕರಿಗೆ Learning Outcome based achievement survey tool preparation & workshop ತರಬೇತಿಯನ್ನು ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರಿಗೆ ನೀಡುತ್ತಿದ್ದು, ಇವು ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಮುಖಾಂತರ ವಿದ್ಯಾರ್ಥಿಗಳಿಗೆ ತಲುಪುತ್ತಿವೆ.<br>➢ ಸದರಿ ಜಿಲ್ಲೆಯ 44 ಶಾಲೆಯಲ್ಲಿ 01 ರಿಂದ 5ನೇ ತರಗತಿ ಬೋಧಿಸುವ EMTIP 1,2,3,4, & 5 ರ ತರಬೇತಿಯನ್ನು ನೀಡಲಾಗಿದೆ.<br>➢ 33 ಶಾಲೆಯಲ್ಲಿ 6ನೇ ತರಗತಿ ಬೋಧಿಸುವ ಶಿಕ್ಷಕರಿಗೆ EMTIP-6 ತರಬೇತಿಯನ್ನು ನೀಡಲಾಗಿದೆ.<br>➢ ಕರ್ನಾಟಕ ಸರ್ಕಾರವು 2025 – 26ನೇ ಸಾಲಿಗೆ ರಾಯಚೂರಿನಲ್ಲಿ 1ನೇ ತರಗತಿಯ 176 ಆಂಗ್ಲ ಮಾಧ್ಯಮ ದ್ವಿಭಾಷಾ ತರಗತಿಗಳನ್ನು ಪ್ರಾರಂಭಿಸಿದ್ದು, ಸದರಿ ಶಾಲಾ ಶಿಕ್ಷಕರಿಗೆ ತರಬೇತಿಯನ್ನು ಆಯೋಜಿಸಲು ಯೋಜಿಸಲಾಗಿದೆ. |

| | | |
|---|---|---|
| | | ➢ ಮಕ್ಕಳ ಕಲಿಕಾ ಸಾಮರ್ಥ್ಯ ಹೆಚ್ಚಿಸಲು ಕಲಿಕಾ ಚೇತರಿಕೆ, ಕಲಿಕಾ ಬಲವರ್ಧನೆ ಕಾರ್ಯಕ್ರಮಗಳಡಿಯಲ್ಲಿ ಕಲಿಕಾ ಫಲಾಧಾರಿತ, ಚಟುವಟಿಕಾ ಆಧಾರಿತ ವಿದ್ಯಾರ್ಥಿ ಚಟುವಟಿಕಾ ಪುಸ್ತಕಗಳನ್ನು ಸಿದ್ಧಪಡಿಸಿ ವಿದ್ಯಾರ್ಥಿಗಳಿಗೆ ನೀಡಲಾಗಿದೆ ಹಾಗೂ ಬಳಕೆಯ ಸಂಬಂಧ ಶಿಕ್ಷಕರಿಗೆ ಮಾರ್ಗದರ್ಶನ ನೀಡಲಾಗಿದೆ.<br>• ಪ್ರೌಢ ಶಾಲಾ ಮಕ್ಕಳ ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.<br>➢ ಸರ್ಕಾರಿ ಪ್ರೌಢಶಾಲೆಗಳಲ್ಲಿ ತಂತ್ರಜ್ಞಾನ ಬೆಂಬಲಿತ ಕಲಿಕಾ ಕಾರ್ಯಕ್ರಮ (TALP)ವನ್ನು 2016-17ರಿಂದ ಅನುಷ್ಠಾನಗೊಳಿಸಲಾಗುತ್ತಿದೆ.<br>➢ ಈ ಕಾರ್ಯಕ್ರಮದಡಿ ಶಾಲೆಗಳಿಗೆ ವಿವಿಧ ಯೋಜನೆಗಳಡಿಯಲ್ಲಿ ಈ ಜಿಲ್ಲೆಯಲ್ಲಿರುವ 200 ಸರ್ಕಾರಿ ಪ್ರೌಢ ಶಾಲೆಗಳಿಗೆ ಕಂಪ್ಯೂಟರ್ ಲ್ಯಾಬ್, 198 ಸರ್ಕಾರಿ ಪ್ರೌಢ ಶಾಲೆಗಳಿಗೆ ಲ್ಯಾಪ್‌ಟಾಪ್, 163 ಸರ್ಕಾರಿ ಪ್ರೌಢ ಶಾಲೆಗಳಿಗೆ ಪ್ರೊಜೆಕ್ಟರ್ ಹಾಗೂ 143 ಸರ್ಕಾರಿ ಪ್ರೌಢ ಶಾಲೆಗಳಿಗೆ ಯು.ಪಿ.ಎಸ್ ಒದಗಿಸಲಾಗಿರುತ್ತದೆ.<br>➢ ಸದರಿ ಉಪಕರಣಗಳನ್ನು ಬಳಸಿಕೊಂಡು ಶಿಕ್ಷಕರು ಇ-ಸಂಪನ್ಮೂಲಗಳನ್ನು ಸೃಜಿಸಿ ತರಗತಿ ಬೋಧನಾ ಕಲಿಕಾ ಸಾಮರ್ಥ್ಯವನ್ನು ಉತ್ತಮಪಡಿಸುತ್ತಿದ್ದಾರೆ.<br>➢ ಶಿಕ್ಷಕರು ಮತ್ತು ವಿದ್ಯಾರ್ಥಿಗಳಿಗೆ Digital Skill ಬಳಕೆ ಹಾಗೂ ಕಂಪ್ಯೂಟರ್ ಆಧಾರಿತ ಶಿಕ್ಷಣದ ಅಭಿವೃದ್ಧಿಗೆ ಸಂಬಂಧಿಸಿದಂತೆ ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ ತರಬೇತಿಯನ್ನು ನೀಡುವ ಮೂಲಕ ಮಕ್ಕಳ ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸಲು ಕ್ರಮವಹಿಸಲಾಗಿದೆ. |
| ಆ) | ಶಾಲಾ ಮಕ್ಕಳಿಗೆ ಅವಶ್ಯಕವಾಗಿ ಬೇಕಾದ ಜ್ಞಾನ ಕೌಶಲ್ಯಗಳು ಮತ್ತು ಮೌಲ್ಯಗಳನ್ನು ಹೆಚ್ಚಿಸಿಕೊಳ್ಳುವ ನಿಟ್ಟಿನಲ್ಲಿ ಸರ್ಕಾರದ ಕಾರ್ಯಯೋಜನೆಗಳೇನು; | ಶಾಲಾ ಮಕ್ಕಳ ಸಾಮರ್ಥ್ಯವನ್ನು ಹೆಚ್ಚಿಸುವ ಕುರಿತು ಶಿಕ್ಷಕರಿಗೆ ವಿವಿಧ ವಿಷಯದ ಬಗ್ಗೆ ಹಾಗೂ ಕಲಿಕಾ ಫಲಗಳನ್ನು ಅಭಿವೃದ್ಧಿಪಡಿಸುವ ಕುರಿತು ತರಬೇತಿಗಳನ್ನು ನೀಡುತ್ತಿದ್ದು ಶಿಕ್ಷಕರ ಮೂಲಕ ಶಾಲಾ ಮಕ್ಕಳಿಗೆ ತಲುಪುವಂತೆ ಮಾಡಲಾಗುತ್ತಿದೆ.<br>ಆಂಗ್ಲ ಮಾಧ್ಯಮ ದ್ವಿಭಾಷಾ ಶಾಲೆಗಳನ್ನು ಪ್ರಾರಂಭಿಸಿದ್ದು, ಸದರಿ ಶಾಲಾ ಶಿಕ್ಷಕರಿಗೆ EMTIP ತರಬೇತಿಯನ್ನು ನೀಡಲಾಗಿದೆ. ಇದರಿಂದ ಶಾಲಾ ವಿದ್ಯಾರ್ಥಿಗಳಿಗೆ ಬೇಕಾದ ಜ್ಞಾನ ಕೌಶಲ್ಯಗಳನ್ನು ಹೆಚ್ಚಿಸುವುದು ಹಾಗೂ ಕಲಿಕಾ ವಾತಾವರಣವನ್ನು ಉತ್ತಮಗೊಳಿಸಲು ಸದರಿ ತರಬೇತಿಗಳು ಸಹಕಾರಿಯಾಗಿವೆ. |

| | | |
|---|---|---|
| | | ಮಕ್ಕಳಲ್ಲಿ ಕೌಶಲ್ಯ ಅಭಿವೃದ್ದಿಗಾಗಿ NSQF ಯೋಜನೆಯಡಿ Automobile, Information technology, Beauty and Wellness, Retail, Appearals Made-ups and Home furnishing, Electronics and Hardware ಎಂಬ 6 ಸೆಕ್ಟರ್ ಗಳಿಗೆ ಸಂಬಂಧಿಸಿದಂತೆ 9 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ಕೌಶಲ್ಯಾಧಾರಿತ ತರಬೇತಿ ನೀಡಲಾಗುತ್ತಿದೆ.<br>ವಿದ್ಯಾರ್ಥಿಗಳಲ್ಲಿ ಮೌಲ್ಯಗಳನ್ನು ರೂಡಿಸಲು NCERT ಯವರು ಶಿಫಾರಸ್ಸು ಮಾಡಿರುವ 83 ಮೌಲ್ಯಗಳಿಗೆ ಸಂಬಂಧಿಸಿದಂತೆ ವಿದ್ಯಾರ್ಥಿ ಚಟುವಟಿಕಾ ಮಾಡ್ಯೂಲ್ ಹಾಗೂ ಶಿಕ್ಷಕರ ಮಾರ್ಗದರ್ಶಿ ಕೈಪಿಡಿಯನ್ನು ಸಿದ್ಧಪಡಿಸಲಾಗುತ್ತಿದೆ. 2025–26 ನೇ ಸಾಲಿನಲ್ಲಿ ಈ ಸಂಬಂಧ ಶಿಕ್ಷಕರಿಗೆ ತರಬೇತಿ ನೀಡಲು ಯೋಜಿಸಲಾಗಿದೆ. |
| ಇ) | ಶಾಲಾ ಮಕ್ಕಳ ದಾಖಲಾತಿ ಮತ್ತು ಹಾಜರಾತಿ ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರದ ಯೋಜನೆಗಳು ಸಫಲತೆಯನ್ನು ಕಂಡು ಕೊಂಡಿದೆಯೇ; ಹಾಗಿದ್ದಲ್ಲಿ, ವಿವರವಾದ ಅಂಕಿ– ಅಂಶಗಳೊಂದಿಗೆ ಮಾಹಿತಿ ನೀಡುವುದು? | ಪ್ರೋತ್ಸಾಹದಾಯಕ ಯೋಜನೆಗಳಾದ ಉಚಿತ ಪಠ್ಯಪುಸ್ತಕ, ಸಮವಸ್ತ್ರ, ಶೂ–ಸಾಕ್ಸ್, ಅಕ್ಷರ ದಾಸೋಹ ಯೋಜನೆಯಡಿಯಲ್ಲಿ ಬಿಸಿ ಊಟ, ಕ್ಷೀರ ಭಾಗ್ಯ, ಬಾಳೆ ಹಣ್ಣು, ಮೊಟ್ಟೆ, ಶಾಲಾ ಪ್ರಾರಂಭೋತ್ಸವ, ದಾಖಲಾತಿ ಆಂದೋಲನ, ಮನೆ ಮನೆ ಭೇಟಿ ಕಾರ್ಯಕ್ರಮಗಳ ಮೂಲಕ ಮಕ್ಕಳ ದಾಖಲಾತಿ ಹಾಗೂ ಹಾಜರಾತಿ ಹೆಚ್ಚಿಸುವ ನಿಟ್ಟಿನಲ್ಲಿ ಕ್ರಮವಹಿಸಲಾಗಿದೆ. |

ಸಂಖ್ಯೆ: ಇಪಿ 116 ಪಿಎಂಸಿ 2025

(ಎಸ್.ಮಧು ಬಂಗಾರಪ್ಪ)

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು